( ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು )

**ದಿಃ 18/12/2023**
**ಅಸಲು ದಾವೆ.ನಂ.184/2020**
**ಪಿ.ಡಬ್ಲ್ಯೂ1**

( ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ.ಎಂ ಎನ್ ಅರ್ ವಕೀಲರಿಂದ ವಾದಿಯ ಪರವಾಗಿ )

ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ ಅದರಲ್ಲಿ ಇರುವ ವಿಷಯಗಳನ್ನು ನಾನೇ ಹೇಳಿ ಬರೆಸಿದ್ದೇನೆ, ಸಹಿಗಳು ನನ್ನದೆ ಇದೆ. ನಾನು ಈ ಕೆಳಗೆ ಹೇಳಿದ ದಾಖಲೆಗಳನ್ನು ಹಾಜರು ಪಡಿಸಿರುತ್ತೇನೆ. ಅವುಗಳನ್ನು ಪ್ರಸ್ತುತ ದಾವೆಯಲ್ಲಿ ಗುರುತಿಸಬೇಕಾಗಿ ಕೋರಿಕೊಳ್ಳುತ್ತೇನೆ.

ಸದರಿ ದಾಖಲೆಗಳನ್ನು ಈ ಕೆಳಗಿನಂತೆ ಗುರುತಿಸಲಾಯಿತು.

ದಾವಾ ಸ್ವತ್ತಿಗೆ ಸಂಬಂದಿಸಿದ ಒಂದು ಪಹಣಿ ಪತ್ರವನ್ನು ನಿಪಿ1 ಎಂದು ,

ದಾವಾ ಸ್ವತ್ತು ವಾದಿ ಹೆಸರಿಗೆ ತಹಶೀಲ್ದಾರ್ , ಅರಕಲಗೂಡು ಇವರ ಆದೇಶದ ಪ್ರಕಾರ ಮಂಜೂರಾದ ಬಗ್ಗೆ ಇರುವ ಮಂಜೂರಾತಿ ಪತ್ರದ ದೃಢೀಕೃತ ನಕಲನ್ನು ನಿಪಿ2 ಎಂದು ,

ದಾವಾ ಸ್ವತ್ತನ್ನು ವಾದಿ ಹೆಸರಿಗೆ ಅಕ್ರಮ ಸಕ್ರಮದ ಬಗರ್ ಹುಕುಂ ಕಮಿಟಿಯ ಆದೇಶ ಆಗಿರುವ ಬಗ್ಗೆ ಇರುವ ಆದೇಶ ಪತ್ರ , ಅಧಿಕೃತ ಜ್ಞಾಪನ , ಎರಡು ನಕ್ಷೆಗಳ ದೃಢೀಕೃತ ನಕಲುಗಳನ್ನು ಕ್ರಮವಾಗಿ ನಿಪಿ 3 ರಿಂದ ನಿಪಿ 6 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಃ ವಾದಿಯ ಪರ ವಕೀಲರು ಸಮಯಾವಕಾಶವನ್ನು ಕೋರಿದ್ದು ಅನುಮತಿಸಲಾಯಿತು)

( ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು )

**ಓ.ಹೇ.ಕೇ.ಸ.ಇದೆ.**

**ಸಿವಿಲ್ ನ್ಯಾಯಾಧೀಶರು,**

**ಜೆ.ಎಂ.ಎಫ್.ಸಿ,ಅರಕಲಗೂಡು.**